All India Radio: Bangalore
National Bulletin In Kannada
12.07.2026 7.35 pm
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

<>><><*><><<>

ಮುಖ್ಯಾಂಶಗಳು

೧. ಭಾರತೀಯ ಐಟಿ ವಲಯ- ಸಾಫ್ಟ್‌ವೇರ್ ಸೇವೆಗಳ ಮಾದರಿಯಿಂದ 'ಸೇವೆಯಾಗಿ ಎಐ' ಮಾದರಿಗೆ ಪರಿವರ್ತನೆಗೊಳ್ಳುವಂತೆ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್ ಕರೆ

೨. ಖ್ಯಾತ ಹಿನ್ನೆಲೆ ಗಾಯಕಿ, ಗಾನ ಕೋಗಿಲೆ ಎಸ್.ಜಾನಕಿ ವಿಧಿವಶ; ಗಣ್ಯರ ಸಂತಾಪ

೩. ಇರಾನ್ ಮೇಲೆ ಅಮೆರಿಕ ಮತ್ತೊಂದು ಸುತ್ತಿನ ದಾಳಿ; ಪುನಃ ಹಾರ್ಮುಜ್ ಜಲಸಂಧಿ ಮುಚ್ಚಿದ ಟೆಹ್ರಾನ್

೪. ವಿಂಬಲ್ಡನ್ ಟೆನಿಸ್: ಮಹಿಳಾ ಸಿಂಗಲ್ಸ್‌ನಲ್ಲಿ ಲಿಂಡಾ ನೊಸ್ಕೋವಾಗೆ ಚೊಚ್ಚಲ ಗ್ರ್ಯಾಂಡ್ ಸ್ಲಾಮ್ ಪ್ರಶಸ್ತಿ

೫. ಫಿಫಾ ವಿಶ್ವಕಪ್ ಪುಟ್ಬಾಲ್: ನಾರ್ವೆ ವಿರುದ್ಧ ಗೆದ್ದು ಸೆಮಿಫೈನಲ್‌ಗೆ ಲಗ್ಗೆ ಇಟ್ಟ ಇಂಗ್ಲೆಂಡ್

<>><><*><><<>

ಭಾರತೀಯ ಐಟಿ ವಲಯವು ಸಾಫ್ಟ್‌ವೇರ್ ಸೇವೆಗಳ ಮಾದರಿಯಿಂದ 'ಸೇವೆಯಾಗಿ ಎಐ' ಮಾದರಿಗೆ ಪರಿವರ್ತನೆಗೊಳ್ಳುವಂತೆ ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಐಟಿ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದ್ದಾರೆ. ಹೈದರಾಬಾದ್‌ನಲ್ಲಿ ಹೈಸಿಯಾ ಆಯೋಜಿಸಿದ್ದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಭಾರತದ ಮುಂದಿನ ಹಂತದ ಬೆಳವಣಿಗೆಯು ಕೃತಕ ಬುದ್ಧಿಮತ್ತೆ, ಅರೆವಾಹಕಗಳು, ಎಲೆಕ್ಟ್ರಾನಿಕ್ಸ್ ಉತ್ಪಾದನೆ ಮತ್ತು ಸುಧಾರಿತ ಮೂಲಸೌಕರ್ಯದಿಂದ ನಡೆಸಲ್ಪಡುತ್ತದೆ. ಇವು ವಿಕಸಿತ ಭಾರತ್ ೨೦೪೭ ರ ದೃಷ್ಟಿಕೋನಕ್ಕೆ ಅನುಗುಣವಾಗಿರುತ್ತವೆ ಎಂದು ಹೇಳಿದರು. ಕೃತಕ ಬುದ್ಧಿಮತ್ತೆಗೆ ಕಾರ್ಯತಂತ್ರದ ಬದಲಾವಣೆಯನ್ನು ಉದ್ಯಮ-ಶೈಕ್ಷಣಿಕ ಸಹಯೋಗದಿಂದ ಮುನ್ನಡೆಸಬೇಕು. ಭವಿಷ್ಯದ ಕಾರ್ಯಪಡೆಗೆ ತರಬೇತಿ ನೀಡಲು ಓಂSSಅಔಬನೊಂದಿಗೆ ಸಮಗ್ರ ಎಐ ಪಠ್ಯಕ್ರಮವನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<>><><*><><<>

ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಎರಡು ದಿನಗಳ ನ್ಯೂಜಿಲೆಂಡ್ ಭೇಟಿಯನ್ನು ಪೂರ್ಣಗೊಳಿಸಿ, ಭಾರತಕ್ಕೆ ಪ್ರಯಾಣ ಬೆಳೆಸಿದ್ದಾರೆ. ನಾಲ್ಕು ದಶಕಗಳಲ್ಲಿ ಭಾರತೀಯ ಪ್ರಧಾನಿಯೊಬ್ಬರು ನ್ಯೂಜಿಲೆಂಡ್‌ಗೆ ನೀಡಿದ ಮೊದಲ ಭೇಟಿ ಇದಾಗಿದ್ದು, ದ್ವಿಪಕ್ಷೀಯ ಸಂಬಂಧಗಳಿಗೆ ಪ್ರಮುಖ ಉತ್ತೇಜನ ನೀಡಿದೆ.

ಭೇಟಿಯ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್ ಅವರೊಂದಿಗೆ ಮಾತುಕತೆ ನಡೆಸಿದರು. ರಕ್ಷಣೆ, ಪ್ರವಾಸೋದ್ಯಮ, ಕ್ರೀಡೆ, ವಿಪತ್ತು ನಿರ್ವಹಣೆ, ಹೈನುಗಾರಿಕೆ ಮತ್ತು ಪಶುಸಂಗೋಪನೆ ಸೇರಿದಂತೆ ಕ್ಷೇತ್ರಗಳಲ್ಲಿ ಐದು ತಿಳುವಳಿಕೆ ಒಪ್ಪಂದಗಳ ವಿನಿಮಯಕ್ಕೆ ಉಭಯ ನಾಯಕರು ಸಾಕ್ಷಿಯಾದರು. ಇದೇ ವೇಳೆ ಆಕ್ಲೆಂಡ್‌ನ ಸ್ಪಾರ್ಕ್ ಅರೆನಾದಲ್ಲಿ ನಡೆದ ಸಮುದಾಯ ಕಾರ್ಯಕ್ರಮದಲ್ಲಿ ಹತ್ತು ಸಾವಿರಕ್ಕೂ ಹೆಚ್ಚು ಭಾರತೀಯ ಸಮುದಾಯದವರು ಭಾಗವಹಿಸಿದ್ದರು. ಸಭೆಯನ್ನುದ್ದೇಶಿಸಿ ಮಾತನಾಡಿದ ನ್ಯೂಜಿಲೆಂಡ್ ಪ್ರಧಾನಿ ಕ್ರಿಸ್ಟೋಫರ್ ಲಕ್ಸನ್, ಭಾರತವನ್ನು ವಿಶ್ವಾಸಾರ್ಹ ಸ್ನೇಹಿತ ಎಂದು ಬಣ್ಣಿಸಿದರು. ನ್ಯೂಜಿಲೆಂಡ್‌ನ ಪ್ರಗತಿಗೆ ಭಾರತೀಯ ಸಮುದಾಯದ ಕೊಡುಗೆಯನ್ನು ಶ್ಲಾಘಿಸಿದರು. ಈ ಭೇಟಿಯು ಭಾರತ-ನ್ಯೂಜಿಲೆಂಡ್ ಸಂಬಂಧಗಳಲ್ಲಿ ಹೊಸ ಅಧ್ಯಾಯವನ್ನು ಬರೆದಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<>><><*><><<>

೧೯೮೮ ರಲ್ಲಿ ಭಾರತಿರಾಜ ಅವರ ನಿರ್ದೇಶನದ ತಮಿಳು ಚಿತ್ರ "ಸೆಂತೂರ ಪೂವೆ" ಗಾಯನಕ್ಕಾಗಿ ಎಸ್.ಜಾನಕಿ ಅತ್ಯುತ್ತಮ ಮಹಿಳಾ ಹಿನ್ನೆಲೆ ಗಾಯಕಿಗಾಗಿ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಗೆದ್ದರು. ಅವರು ೩೩ ರಾಜ್ಯ ಚಲನಚಿತ್ರ ಪ್ರಶಸ್ತಿಗಳು ಹಾಗೂ ೨೦೧೩ ರಲ್ಲಿ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ತಮಿಳಿನಲ್ಲಿ ಸಿಂಗರ ವೇಲನೆ ದೇವಾ, ಚಿನ್ನಂಚಿರಿಯ ವಣ್ಣಪರವೈ ಮತ್ತು ಸಕಲಕಲಾ ವಲ್ಲವನ್, ಕನ್ನಡದಲ್ಲಿ ನಗುವ ನಯನ, ಜೊತೆಯಲಿ ಜೊತೆ ಜೊತೆಯಲಿ ಮತ್ತು ಚಿನ್ನದ ಮಲ್ಲಿಗೆ ಹೂವೆ ಸೇರಿದಂತೆ ನೂರಾರು ಜನಪ್ರಿಯ ಹಾಡುಗಳು ಎಸ್. ಜಾನಕಿ ಅವರ ಕಂಠದಿಂದ ಮೂಡಿಬಂದಿದೆ.

<>><><*><><<>

ಹಾರ್ಮುಜ್ ಜಲಸಂಧಿಯ ಮೂಲಕ ಸಾಗುತ್ತಿದ್ದ ಸೈಪ್ರಸ್ ಧ್ವಜ ಹೊತ್ತ ಕಂಟೇನರ್ ಹಡಗಿನ ಮೇಲೆ ಇರಾನ್ ಪಡೆಗಳು ದಾಳಿ ಮಾಡಿದ ನಂತರ ಅಮೆರಿಕ, ಇರಾನ್ ವಿರುದ್ಧ ಮತ್ತೊಂದು ಸುತ್ತಿನ ದಾಳಿ ನಡೆಸಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ನಿರ್ದೇಶನದ ಮೇರೆಗೆ ಈ ದಾಳಿಗಳನ್ನು ನಡೆಸಲಾಗಿದೆ ಎಂದು ಅಮೆರಿಕ ಸೇನೆ ತಿಳಿಸಿದೆ. ವಾಣಿಜ್ಯ ಹಡಗಿನ ಮೇಲಿನ ದಾಳಿಯಲ್ಲಿ ಸಿಬ್ಬಂದಿಯೊಬ್ಬರು ಕಾಣೆಯಾಗಿದ್ದಾರೆ ಮತ್ತು ಹಡಗಿನಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ಎಂಜಿನ್ ಕೊಠಡಿಗೆ ಹೆಚ್ಚಿನ ಹಾನಿಯಾಗಿ ಹಡಗಿಗೆ ಪ್ರಯಾಣ ಮುಂದುವರಿಸಲು ಸಾಧ್ಯವಾಗುತ್ತಿಲ್ಲ ಎಂದು ಅಮೆರಿಕ ತಿಳಿಸಿದೆ. ಕ್ವೆಶ್ಮ್ ದ್ವೀಪ, ಬಂದರ್ ಅಬ್ಬಾಸ್ ಮತ್ತು ಸಿರಿಕ್ ಮೇಲೆ ದಾಳಿ ನಡೆಸಲಾಗಿದೆ. ಏತನ್ಮಧ್ಯೆ, ಹಾರ್ಮುಜ್ ಜಲಸಂಧಿಯನ್ನು ಇರಾನ್ ಮುಚ್ಚಿದೆ. ಹಡಗೊಂದು ಅನಧಿಕೃತ ಮಾರ್ಗ ಬಳಸಲು ಪ್ರಯತ್ನಿಸಿದ ಘಟನೆಯ ನಂತರ ಸಮುದ್ರ ಮಾರ್ಗವನ್ನು ಮುಚ್ಚಲಾಗಿದೆ ಎಂದು ಇರಾನ್‌ನ ನೌಕಾಪಡೆ ತಿಳಿಸಿದೆ.

ಈ ಪ್ರದೇಶದಲ್ಲಿ ಅಮೆರಿಕ ಹಸ್ತಕ್ಷೇಪ ನಿಲ್ಲಿಸುವವರೆಗೆ ಯಾವುದೇ ಹಡಗನ್ನು ಕಾರ್ಯತಂತ್ರದ ಜಲಮಾರ್ಗದ ಮೂಲಕ ಸಾಗಿಸಲು ಅನುಮತಿಸಲಾಗುವುದಿಲ್ಲ ಎಂದು ಇರಾನ್ ಹೇಳಿದೆ.

<>><><*><><<>

ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಕಾಯ್ದೆ -೨೦೦೬ ರ ಅಡಿಯಲ್ಲಿ ಉಲ್ಲಂಘನೆಗಳನ್ನು ಆರೋಪಿಸಿ, ಹಲವಾರು ಗ್ರಾಹಕ ದೂರುಗಳು ಬಂದ ಹಿನ್ನೆಲೆಯಲ್ಲಿ, ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ, ಸ್ವಿಗ್ಗಿ ಇನ್‌ಸ್ಟಾಮಾರ್ಟ್‌ಗೆ ಒಂಬತ್ತು ನೋಟಿಸ್‌ಗಳನ್ನು ನೀಡಿದೆ. ನೋಟಿಸ್‌ಗೆ ಉತ್ತರಿಸಿದ್ದರೆ, ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಪ್ರಾಧಿಕಾರ ಎಚ್ಚರಿಸಿದೆ. ಸ್ವಿಗ್ಗಿ ಇನ್‌ಸ್ಟಾಮಾರ್ಟ್ ಮೂಲಕ ಅವಧಿ ಮೀರಿದ, ಹಾಳಾದ, ಕೊಳೆತ, ಕಲುಷಿತ ಮತ್ತು ಅಸುರಕ್ಷಿತ ಆಹಾರ ಉತ್ಪನ್ನಗಳನ್ನು ಪೂರೈಸಲಾಗುತ್ತಿದೆ ಎಂದು ಗ್ರಾಹಕರ ದೂರುಗಳು ಆರೋಪಿಸಿವೆ. ತಪ್ಪಾದ, ಅಮಾನ್ಯ ಅಥವಾ ಅಸ್ತಿತ್ವದಲ್ಲಿಲ್ಲದ ಪರವಾನಗಿ ಸಂಖ್ಯೆಗಳು ಮತ್ತು ಎಫ್‌ಎಸ್‌ಎಸ್‌ಎಐ ನಲ್ಲಿ ನೋಂದಾಯಿಸಲಾದ ಹೆಸರುಗಳಿಗಿಂತ ಭಿನ್ನವಾದ ಹೆಸರುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಆಹಾರ ವ್ಯವಹಾರ ಘಟಕಗಳ ಬಗ್ಗೆಯೂ ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ ಕಳವಳ ವ್ಯಕ್ತಪಡಿಸಿವೆ.

<>><><*><><<>

ವಿಯೆಟ್ನಾಂನ ಫುಕ್ವಾಕ್ ದ್ವೀಪದ ಬಳಿ ಭಾರತೀಯ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಸ್ಪೀಡ್ ಬೋಟ್ ಮಗುಚಿ ಬಿದ್ದ ಪರಿಣಾಮ ೧೫ ಮಂದಿ ಭಾರತೀಯರು ಸಾವನ್ನಪ್ಪಿದ್ದಾರೆ. ೨೧ ಜನರನ್ನು ರಕ್ಷಿಸಲಾಗಿದೆ. ೩೨ ಭಾರತೀಯ ಪ್ರವಾಸಿಗರು ಮತ್ತು ನಾಲ್ವರು ಸಿಬ್ಬಂದಿಯನ್ನು ಹೊತ್ತೊಯ್ಯುತ್ತಿದ್ದ ದೋಣಿ ಹಾನ್ ಮೇ ರುಟ್ ನ್ಗೋಯಿ ದ್ವೀಪದಿಂದ ಸುಮಾರು ೪೦೦ ಮೀಟರ್ ದೂರದಲ್ಲಿ ಉರುಳಿಬಿದ್ದಿದ್ದು, ರಕ್ಷಣಾ ಕಾರ್ಯಾಚರಣೆ ಆರಂಭವಾಗಿದೆ. ದುರಂತಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ, ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಸೇರಿದಂತೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ. ಗಾಯಾಳುಗಳು ಶೀಘ್ರವಾಗಿ ಮತ್ತು ಸಂಪೂರ್ಣವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

<>><><*><><<>

ವಿಂಬಲ್ಡನ್ ಮಹಿಳೆಯರ ಸಿಂಗಲ್ಸ್‌ನಲ್ಲಿ ಜೆಕ್ ಗಣರಾಜ್ಯದ ೨೧ ವರ್ಷದ ಲಿಂಡಾ ನೊಸ್ಕೋವಾ, ತಮ್ಮ ಚೊಚ್ಚಲ ಗ್ರ್ಯಾಂಡ್ ಸ್ಲಾಮ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಲಂಡನ್‌ನ ಸೆಂಟರ್ ಕೋರ್ಟ್‌ನಲ್ಲಿ ನಿನ್ನೆ ನಡೆದ ಫೈನಲ್ ಪಂದ್ಯದಲ್ಲಿ ಲಿಂಡಾ ನೊಸ್ಕೋವಾ, ಲಂಡನ್‌ನ ಕರೊಲಿನಾ ಮುಚೋವಾ ಅವರನ್ನು ೬-೨, ೫-೭, ೬-೩ ಅಂತರದಿಂದ ಮಣಿಸಿ, ಪ್ರಶಸ್ತಿ ತನ್ನದಾಗಿಸಿಕೊಂಡರು.

೨೦೨೩ರಲ್ಲಿ ಮಾರ್ಕೆಟಾ ವೊಂಡ್ರೌಶೋವಾ ಹಾಗೂ ೨೦೨೪ರಲ್ಲಿ ಬಾರ್ಬೋರಾ ಕ್ರೆಜಿಕೋವಾ ಬಳಿಕ, ಕಳೆದ ನಾಲ್ಕು ವರ್ಷಗಳಲ್ಲಿ ವಿಂಬಲ್ಡನ್ ಪ್ರಶಸ್ತಿ ಗೆದ್ದ ಮೂರನೇ ಜೆಕ್ ಗಣರಾಜ್ಯದ ಮಹಿಳಾ ಆಟಗಾರ್ತಿ ಎಂಬ ಹೆಗ್ಗಳಿಕೆಗೆ ನೊಸ್ಕೋವಾ ಪಾತ್ರರಾಗಿದ್ದಾರೆ. ಇಂದು ರಾತ್ರಿ ನಡೆಯಲಿರುವ ಪುರುಷರ ಸಿಂಗಲ್ಸ್ ವಿಭಾಗದ ಫೈನಲ್‌ನಲ್ಲಿ ವಿಶ್ವದ ನಂ.೧ ಆಟಗಾರ ಇಟಲಿಯ ಜಾನಿಕ್ ಸಿನ್ನರ್ ಹಾಗೂ ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಪ್ರಶಸ್ತಿಗಾಗಿ ಸೆಣಸಲಿದ್ದಾರೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೮.೩೦ಕ್ಕೆ ಆರಂಭವಾಗಲಿದೆ.

<>><><*><><<>

ಅಮೆರಿಕದ ಫ್ಲೋರಿಡಾದ ಮಿಯಾಮಿ ಕ್ರೀಡಾಂಗಣದಲ್ಲಿ ಇಂದು ಬೆಳಗ್ಗೆ ನಡೆದ ಫಿಫಾ ವಿಶ್ವಕಪ್ ಪುಟ್ಬಾಲ್‌ನಲ್ಲಿ ಇಂಗ್ಲೆಂಡ್ ತಂಡ, ನಾರ್ವೆ ತಂಡವನ್ನು ೨-೧ ಗೋಲುಗಳಿಂದ ಮಣಿಸುವ ಮೂಲಕ ಸೆಮಿಫೈನಲ್‌ಗೆ ಲಗ್ಗೆ ಇಟ್ಟಿದೆ.  ಜೂಡ್ ಬೆಲ್ಲಿಂಗ್‌ಹ್ಯಾಮ್ ಅವರ ಅದ್ಭುತ ಎರಡು ಗೋಲುಗಳ ಮೂಲಕ ಇಂಗ್ಲೆಂಡ್ ತಂಡ, ಸೆಮಿಫೈನಲ್‌ಗೆ ಮೂರನೇ ತಂಡವಾಗಿ ಮುನ್ನಡೆದಿದೆ. ಕಾನ್ಸಾಸ್ ಸಿಟಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಅರ್ಜೆಂಟೀನಾ-ಸ್ವಿಟ್ಜರ್‌ಲ್ಯಾಂಡ್ ನಡುವಿನ ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯ ಪ್ರಗತಿಯಲ್ಲಿದೆ.

<>><><*><><<>

ಇಂಗ್ಲೆಂಡ್‌ನ ವೆಸ್ಟ್ ಎಂಡ್‌ನಲ್ಲಿ ಕಳೆದ ರಾತ್ರಿ ನಡೆದ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್ ಸರಣಿಯ ೫ನೇ ಹಾಗೂ ಕೊನೆಯ ಪಂದ್ಯದಲ್ಲಿ ಇಂಗ್ಲೆಂಡ್ ತಂಡ ಭಾರತವನ್ನು ೫೬ ರನ್‌ಗಳಿಂದ ಮಣಿಸಿ, ಸರಣಿಯನ್ನು ೪-೦ ಅಂತರದಲ್ಲಿ ಜಯಿಸಿದೆ.  ಅದ್ಭುತ ಬ್ಯಾಟಿಂಗ್ ಪ್ರದರ್ಶನದ ಮೂಲಕ ೩ ವಿಕೆಟ್ ನಷ್ಟಕ್ಕೆ ಇಂಗ್ಲೆಂಡ್ ಭಾರತಕ್ಕೆ ೨೫೮ ರನ್‌ಗಳ ಗೆಲುವಿನ ಗುರಿ ನೀಡಿತ್ತು. ಪ್ರತಿಯಾಗಿ ಭಾರತ ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ಕಳೆದುಕೊಂಡು ೨೦೧ ರನ್ ಗಳಿಸಲಷ್ಟೇ ಶಕ್ತವಾಯಿತು. ಈ ಪಂದ್ಯದ ಗೆಲುವಿನ ಬೆನ್ನಲ್ಲೇ ಅಂತಾರಾಷ್ಟ್ರೀಯ ಟಿ-೨೦ ತಂಡ ಶ್ರೇಯಾಂಕದಲ್ಲಿ ಭಾರತವನ್ನು ಹಿಂದಿಕ್ಕಿ ಇಂಗ್ಲೆಂಡ್ ಅಗ್ರಸ್ಥಾನಕ್ಕೇರಿದೆ. ಭಾರತ ಈ ಶ್ರೇಯಾಂಕದಲ್ಲಿ ದಾಖಲೆಯ ೧ ಸಾವಿರದ ೬೦೫ ದಿನಗಳಿಂದ ಅಗ್ರಸ್ಥಾನದಲ್ಲಿತ್ತು.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>

<>><>< ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ  ><><<>